# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) ರವರು ನಿಯಮ-330 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಬೆಳವಣಿಗೆ ಮತ್ತು ಸಮಗ್ರ ಗ್ರಾಮೀಣಾಭಿವೃದ್ಧಿ ಮುಖಾಂತರ ಗ್ರಾಮೀಣ ಪ್ರದೇಶಗಳ ಸುಧಾರಣೆಗಾಗಿ ಉದ್ಭವಿಸುವ ಸವಾಲುಗಳನ್ನು ಕೈಗೆತ್ತಿಕೊಂಡು, ತಂತ್ರಜ್ಞಾನ ವ್ಯವಸ್ಥಾಪನಾ ಶ್ರೇಣಿಯನ್ನು ಅಭಿವೃದ್ಧಿ ಪಡಿಸುವ ಧ್ಯೇಯೋದ್ದೇಶದ ಈಡೇರಿಕೆಗಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೌಕರರಿಗೆ ತರಬೇತಿ ನೀಡಿ ಉನ್ನತ ವ್ಯಾಸಂಗಕ್ಕೆ ಅವಕಾಶ ಕಲ್ಪಿಸಿರುವುದರನ್ವಯ, ಕೆ.ಎಸ್.ಆರ್.ಡಿ.ಪಿ.ಆರ್.ಯು ವಿಶ್ವವಿದ್ಯಾಲಯದಲ್ಲಿ ವಿವಿಧ ಉನ್ನತ ವ್ಯಾಸಂಗ ಪೂರೈಸಿರುವ ಸೇವಾ ನಿರತ ನೌಕರರ ಜ್ಞಾನ ಮತ್ತು ಸೇವೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವ ಉದ್ದೇಶದಿಂದ ಅವರಿಗೆ ಬಡ್ತಿಯಲ್ಲಿ ವಿಶೇಷ ಕೋಟಾ ಅಥವಾ Weightage ನೀಡುವುದು ಹಾಗೂ ಪ್ರತ್ಯೇಕ ಹುದ್ದೆ ಸೃಜನೆ ಮಾಡಿ, ವಿಶೇಷ ನೇಮಕಾತಿ ಮೂಲಕ ಅವಕಾಶ ಕಲ್ಪಿಸಿ ಗ್ರಾಮೀಣಾಭಿವೃದ್ಧಿಗೆ ಪೂರಕ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಮಾನವ ಸಂಪನ್ಮೂಲ ಬಳಸಿಕೊಳ್ಳಲು ಒತ್ತಾಯಿಸಿರುವ ಬಗ್ಗೆ.

**ಉತ್ತರ:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವೃಂದದ ಅಧಿಕಾರಿ/ನೌಕರರುಗಳು ಇಲಾಖೆಯಲ್ಲಿ ನಿರ್ವಹಿಸುವ ವಿವಿಧ ವಿಷಯಗಳು ಹಾಗೂ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಬಗ್ಗೆ ಈಗಾಗಲೇ ರಾಜ್ಯ ಅಬ್ದುಲ್ ನಜೀರ್ ಸಾಬ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಮೂಲಕ ಆಗಿಂದಾಗೆ ಪುನಶ್ಚೇತನ ತರಬೇತಿಯನ್ನು ನೀಡಲಾಗುತ್ತಿದೆ. ಇದರ ಜೊತೆಗೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯದಲ್ಲಿ ಉನ್ನತ ವ್ಯಾಸಂಗವನ್ನು ಪಡೆಯಲು ಇಚ್ಛಿಸಿದ ಅಧಿಕಾರಿ/ನೌಕರರುಗಳನ್ನು ಸರ್ಕಾರದ ವತಿಯಿಂದ ನಿಯೋಜಿಸಲಾಗುತ್ತಿದೆ. ಅವರ ಉನ್ನತ ವ್ಯಾಸಂಗದ ಅವಧಿ ಮುಗಿಯುವವರೆಗೆ ವೇತನ ಮತ್ತು ಭತ್ಯೆಗಳ ಸಹಿತ ರಜೆ ಮಂಜೂರು ಮಾಡಲಾಗುತ್ತಿದೆ.

ಈ ರೀತಿ ಉನ್ನತ ವ್ಯಾಸಂಗ ಪಡೆದ ಅಧಿಕಾರಿ/ನೌಕರರುಗಳು ಗ್ರಾಮ ಪಂಚಾಯಿತಿಯ ಹಂತದಲ್ಲಿ ಕರ್ತವ್ಯ ನಿರ್ವಹಿಸುವುದರ ಮೂಲಕ ಗ್ರಾಮೀಣ ಜನತೆಯಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಉದ್ದೇಶ, ಅಧಿಕಾರಿ ವಿಕೇಂದ್ರಿಕರಣ ತತ್ವ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರಕ್ಕೆ ನೆರವಾಗಿರಬೇಕಾಗಿರುತ್ತದೆ. ಉನ್ನತ ವ್ಯಾಸಂಗ ಪಡೆದ ಅಧಿಕಾರಿ/ನೌಕರರುಗಳಿಗೆ ಬಡ್ತಿ ನೀಡಿ ಅವರ ಸೇವೆಯನ್ನು ಗ್ರಾಮ ಪಂಚಾಯಿತಿಯ ವ್ಯಾಪ್ತಿಯಿಂದ ಬೇರೆ ಹುದ್ದೆಗಳಿಗೆ ನಿಯೋಜಿಸಿರುವುದರಿಂದ ಉನ್ನತ ವ್ಯಾಸಂಗ ಪಡೆದ ಉದ್ದೇಶವೇ ನಿಷ್ಫಲವಾಗುತ್ತದೆ. ಇದರ ಜೊತೆಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಬಡ್ತಿ ನೀಡಲು ಆಡಳಿತಾತ್ಮಕ ಸಮಸ್ಯೆಗಳು ಉಂಟಾಗುತ್ತದೆ. ಆದಕಾರಣ, ಈ ರೀತಿ ವ್ಯಾಸಂಗ ಪಡೆದ ಅಧಿಕಾರಿ/ನೌಕರರುಗಳಿಗೆ ಬಡ್ತಿಯಲ್ಲಿ ವಿಶೇಷ ಕೋಟಾ ನೀಡುವ ಅಥವಾ ಪ್ರತ್ಯೇಕ ಹುದ್ದೆ ಸೃಜಿಸುವ ಯಾವುದೇ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ.

ಸಂಖ್ಯೆ: **ಗ್ರಾಅಪ 713 ಗ್ರಾಪಂಅ 2024**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.